**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 69 ಗ್ರಾಪಂಅ 2011

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 18-02-2012

**ಸುತ್ತೋಲೆ**

**ವಿಷಯ :** ಮಕ್ಕಳ ಅಪೌಷ್ಠಿಕತೆಯನ್ನು ನಿವಾರಿಸುವ ಕುರಿತಂತೆ ಉಪ ಸಮಿತಿಯ ಶಿಫಾರಸ್ಸುಗಳನ್ನು ಅನುಷ್ಠಾನಗೊಳಿಸುವ ಬಗ್ಗೆ.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ರಾಜ್ಯದಲ್ಲಿನ ಅಪೌಷ್ಠಿಕತೆ ಹಾಗೂ ಶಿಶು ಮರಣ ದರವನ್ನು ಕಡಿಮೆಗೊಳಿಸುವ ಕುರಿತು ಮಾನ್ಯ ಉಚ್ಚ ನ್ಯಾಯಾಲಯದ ನಿರ್ದೇಶನದಂತೆ ಉನ್ನತ ಸಮಿತಿಯನ್ನು ರಚಿಸಿದ್ದು, ಸಮಿತಿಯು ದಿನಾಂಕ: 31-10-2011 ರಂದು ಸಭೆ ನಡೆಸಿ ಆರೋಗ್ಯ ಮತ್ತು ಪೌಷ್ಠಿಕತೆ, ಅಂಗವಿಕಲತೆವುಳ್ಳ ಮಕ್ಕಳು, SC/ST, HIV ಪೀಡಿತ ಮಕ್ಕಳು ಹಾಗೂ ವಲಸೆ ಮಕ್ಕಳ ಅವಶ್ಯಕತೆಗಳನ್ನು ಪೂರೈಸುವ ಬಗ್ಗೆ ರೂಪುರೇಷೆಗಳನ್ನು ರೂಪಿಸುವುದು, ಸಮನ್ವಯತೆ ಹಾಗೂ ಅವುಗಳ ಮೇಲ್ವಿಚಾರಣೆ ಕುರಿತು ಪರಿಶೀಲಿಸಲು 3 ಉಪ ಸಮಿತಿಗಳನ್ನು ರಚಿಸಿರುತ್ತದೆ. ಸಮಿತಿಯು ನೀಡಿರುವ ಶಿಫಾರಸ್ಸುಗಳಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಇಲಾಖೆಯು ಈ ಕೆಳಕಂಡ ಶಿಫಾರಸ್ಸುಗಳ ಕ್ರಮ ಕೈಗೊಳ್ಳಬೇಕಾಗಿದ್ದು, ಈ ಬಗ್ಗೆ ಜಿಲ್ಲಾ, ತಾಲ್ಲೂಕು ಹಾಗೂ ಗ್ರಾಮ ಪಂಚಾಯತಿಗಳು ತಮ್ಮ ಹಂತದಲ್ಲಿ ಅಗತ್ಯ ಕ್ರಮ ವಹಿಸುವಂತೆ ಈ ಮೂಲಕ ಸೂಚಿಸಲಾಗಿದೆ.

1. ಮಕ್ಕಳ ಅಪೌಷ್ಠಿಕತೆಗೆ ಸಂಬಂಧಿಸಿದಂತೆ ಸಂಬಂಧಪಟ್ಟ ಎಲ್ಲಾ ಇಲಾಖೆಗಳಿಗೆ ಅನ್ವಯವಾಗುವ ರೀತಿಯಲ್ಲಿ ನಿಗದಿತ ಮಾನದಂಡಗಳು ಮತ್ತು ಗುರಿಗಳನ್ನು ಅಭಿವೃದ್ಧಿಪಡಿಸುವ ಅಗತ್ಯವಿದೆ. ಹಾಗು ಈ ಮಾನದಂಡಗಳು ಮತ್ತು ಗುರಿಗಳ ಎದುರಾಗಿ ಸಾಧಿಸುವ ಪ್ರಗತಿ ಕುರಿತು ಸತತ ಪರಿಶೀಲನೆ ನಡೆಸಲು ಜಂಟಿ ಪರಿಶೀಲನಾ ಕಾರ್ಯಕ್ರಮಗಳನ್ನು ನಡೆಸಬೇಕಾಗುವುದು. ಈ ಅಂಶಗಳನ್ನು ಸಂಬಂಧಿಸಿದ ಎಲ್ಲರೂ ಒಟ್ಟುಗೂಡಿ ಮೇಲ್ವಿಚಾರಣೆ ಮಾಡುವುದರಿಂದ ಶ್ರಮ ಮತ್ತು ಜವಾಬ್ಧಾರಿಗಳನ್ನು ಸಹ ಒಟ್ಟುಗೂಡಿ ಹಂಚಿಕೊಳ್ಳುವಲ್ಲಿ ನೆರವಾಗುತ್ತದೆ.

2. ಗ್ರಾಮೀಣ ಅಂಗನವಾಡಿ ಕೇಂದ್ರಗಳಿಗೆ ಕುಡಿಯುವ ನೀರು ಸರಬರಾಜನ್ನು ಕಲ್ಪಿಸುವುದು. ರಾಜ್ಯದ ಎಲ್ಲಾ ಅಂಗನವಾಡಿ ಕೇಂದ್ರಗಳಿಗೆ ಕೂಡಲೇ ಕುಡಿಯುವ ನೀರಿನ ಸೌಲಭ್ಯಗಳನ್ನು ಒದಗಿಸುವುದು.

3. ಸಮಗ್ರ ಮಕ್ಕಳ ಅಭಿವೃದ್ಧಿ ಯೋಜನೆ/ ಕಾರ್ಯಕ್ರಮದ ಕಾರ್ಯನಿರ್ವಹಣೆ ಬಗ್ಗೆ ಮೇಲ್ವಿಚಾರಣೆ ಮಾಡಲು ಗ್ರಾಮ ಪಂಚಾಯತಿಗಳು, ಬಿ.ವಿ.ಎಸ್., ವಿ.ಹೆಚ್.ಎಸ್.ಎನ್.ಸಿ ಗಳನ್ನು ಜವಾಬ್ಧಾರರನ್ನಾಗಿಸಿ ಕಡ್ಡಾಯಗೊಳಿಸುವುದು. ಅಲ್ಲದೇ ಮಕ್ಕಳ ಅಪೌಷ್ಠಿಕತೆ / ಊಟ ದೊರಕದಿರುವುದಕ್ಕೆ ಕಾರಣವಾದ ಅಂಶಗಳನ್ನು ಗುರುತಿಸಿ ಪರಿಹಾರ ಕ್ರಮಗಳನ್ನು ಕೈಗೊಳ್ಳುವ ಬಗ್ಗೆಯೂ ಸಹ ಸದರಿಯವರಿಗೆ ವಿಶೇಷ ಜವಾಬ್ಧಾರಿಗಳನ್ನು ವಹಿಸಬೇಕಾಗಿದೆ.

4. ಮಕ್ಕಳ ಅಪೌಷ್ಟಿಕತೆ ನಿವಾರಣೆಯಲ್ಲಿ ಗ್ರಾಮ ಸಭಾಗಳ ಪಾತ್ರದ ಬಗ್ಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಿಂದ ದಿನಾಂಕ:01.08.2011ರಂದು (ಸಂಖ್ಯೆ : ಗ್ರಾಅಪ 212 ಗ್ರಾಪಂಅ 2011) ಹೊರಡಿಸಲಾದ ಸುತ್ತೋಲೆಯಲ್ಲಿ ತಿಳಿಸಿದ ಅಂಶಗಳನ್ನು ಕೂಡಲೇ ಜಾರಿಗೊಳಿಸುವುದು.

(ಹೆಚ್.ಬಿ. ರಘುನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

**ಇವರಿಗೆ:**

1. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

3. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿನ ಎಲ್ಲಾ ಗ್ರಾಮ ಪಂಚಾಯತಿಗಳಿಗೆ ಸದರಿ ಸುತ್ತೋಲೆಯ ಪ್ರತಿಯನ್ನು ಕಳುಹಿಸತಕ್ಕದ್ದು.
4. ಶಾಖಾ ರಕ್ಷಾ ಕಡತ.

ಪ್ರತಿ:

1. ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
4. Web Site